# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಲಾಸ

ಕನ್ನಡ ದಿನಪತ್ರಿಕೆ

ಸಂಪಾದಕ : ಮಂಜು ಬನವಾಸೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 127 | Pages. 2 | Date: 22-04-2026, WEDNESDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 127 – ಪುಟಗಳು : 2 | 22-04-2026 | ಬುಧವಾರ | Ph: 8762954248 | ದರ : ₹1


# ಮಹಿಳಾ ಮೀಸಲಾತಿ ಮಸೂದೆ: ಜಟಾಪಟಿ ತೀವ್ರ

## ಬಿಜೆಪಿ ಪರ ಪ್ರೀತಂ, ಕಾಂಗ್ರೆಸ್‌ನಿಂದ ಸಂಸದರ ಬ್ಯಾಟಿಂಗ್ । ಗರಿಗೆದರಿದ ಚಟುವಟಿಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಲೋಕಸಭೆಯಲ್ಲಿ ಮಹಿಳಾ ಮೀಸಲಾತಿ ಮಸೂದೆಗೆ ಸೋಲಾಗಿರುವ ವಿಚಾರ ದೇಶಾದ್ಯಂತ ಚರ್ಚೆಗೆ ಗ್ರಾಸವಾಗಿದ್ದು, ಇದೇ ವಿಚಾರವನ್ನಿಟ್ಟುಕೊಂಡು ಕಾಂಗ್ರೆಸ್‌ಗೆ ಮಹಿಳಾ ವಿರೋಧಿ ಪಟ್ಟ ಕಟ್ಟಲು ಬಿಜೆಪಿ ಯತ್ನಿಸುತ್ತಿದ್ದರೆ ಮತ್ತೊಂದೆಡೆ ಕಾಂಗ್ರೆಸ್ ಸಹ ಬಿಜೆಪಿ ವಿರುದ್ಧ ತನ್ನದೇಯಾ ಅಸ್ತ್ರಗಳನ್ನು ಬಳಸಿ ಜನರ ಗಮನ ಸೆಳೆಯುವ ಪ್ರಯತ್ನ ಮಾಡುತ್ತಿದೆ.

ಮಾಜಿ ಶಾಸಕ ಪ್ರೀತಂ ಜೆ.ಗೌಡ ಹಾಗೂ ಸಂಸದ ಶ್ರೇಯಸ್ ಪಟೇಲ್ ಅವರು ಮಂಗಳವಾರ ಪ್ರತ್ಯೇಕ ಸುದ್ದಿಗೋಷ್ಠಿಯಲ್ಲಿ ತಮ್ಮ ವಿಚಾರಗಳನ್ನು ತೆರೆದಿಟ್ಟರು. ಮಸೂದೆ ಏಕಾಏಕಿ ಆಗಿದ್ದಲ್ಲ ಎಲ್ಲರೊಂದಿಗೆ ಚರ್ಚಿಸಲಾಗಿದೆ ಎಂದು ಪ್ರೀತಂ ಗೌಡ ಹೇಳಿದರೆ ಅದೆಲ್ಲ ಸುಳ್ಳು ಎಂದು ಸಂಸದ ಶ್ರೇಯಸ್ ಪಟೇಲ್ ಹೇಳಿದರು.

ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿಯೂ ಆಗಿರುವ ಮಾಜಿ ಶಾಸಕ ಪ್ರೀತಂ ಗೌಡ ಮಾತನಾಡಿ, ಮಹಿಳಾ ಸಬಲೀಕರಣ ಬಯಸದ ಕಾಂಗ್ರೆಸ್ ಹಾಗೂ ಮಿತ್ರಪಕ್ಷಗಳು ಮಹಿಳಾ ಮೀಸಲಾತಿ ಮಸೂದೆ ವಿರೋಧಿಸಿ ತಮ್ಮ ನಿಜ ಬಣ್ಣ ಬಯಲು ಮಾಡಿವೆ ಎಂದು ವಾಗ್ದಾಳಿ ನಡೆಸಿದರು.

ಮಹಿಳಾ ಮೀಸಲಾತಿ, ಕ್ಷೇತ್ರ ಪುನರ್ ವಿಂಗಡಣೆ ಕುರಿತು ಪ್ರತಿಪಕ್ಷಗಳ ಸಂಸದರೊಂದಿಗೆ ಸುದೀರ್ಘ ಚರ್ಚೆ ನಡೆಸಿದ ಬಳಿಕವೇ ಮಸೂದೆ ಅಂಗೀಕಾರಕ್ಕೆ ನಿರ್ಧರಿಸಲಾಗಿತ್ತು. ಆದರೆ ಕಾಂಗ್ರೆಸ್‌ಗೆ ರಾಷ್ಟ್ರ ಹಿತಕ್ಕಿಂತ ರಾಜಕೀಯ ಹಿತಾಸಕ್ತಿಯೇ ಮುಖ್ಯವಾಗಿತ್ತು. ರಾಜಕೀಯ ಮೇಲಾಟದಲ್ಲಿ ನಮಗೆ ಸೋಲಾಗಿರಬಹುದು. ದೇಶದ ತಾಯಂದಿರು, ಸಹೋದರಿಯರು ಕಾಂಗ್ರೆಸ್ ಅನ್ನು ಯಾವತ್ತಿಗೂ ಕ್ಷಮಿಸುವುದಿಲ್ಲ ಎಂದರು.

ಈ ಮಹತ್ವದ ಮಸೂದೆ ಬಿಜೆಪಿಯ ದಿಢೀರ್ ಪ್ರೀತಿ ಅಲ್ಲ. ಅಯೋಧ್ಯೆಯಲ್ಲಿ ರಾಮ ಮಂದಿರ, ಸಿಎಎ, ಆರ್ಟಿಕಲ್ 370 ರದ್ದು, ತ್ರಿವಳಿ ತಲಾಖ್ ರದ್ದು ಹೀಗೆ ತನ್ನ ನಿಯೋಜಿತ ಉದ್ದೇಶಗಳಂತೆ ಮಹಿಳಾ ಮೀಸಲಾತಿ ಅನುಷ್ಠಾನವೂ ಬಿಜೆಪಿಯ ಭರವಸೆಯಾಗಿದೆ. ರಾಷ್ಟ್ರದ 70 ಕೋಟಿ ಮಹಿಳೆಯರಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ಮಸೂದೆ ಜಾರಿಗೆ ಪ್ರಯತ್ನಿಸಲಾಯಿತು. ಆದರೆ ಅದನ್ನು ಅರ್ಥ ಮಾಡಿಕೊಳ್ಳುವಲ್ಲಿ ಕಾಂಗ್ರೆಸ್ ವಿಫಲವಾಯಿತು ಎಂದರು.

ಮಹಿಳಾ ಮೀಸಲು ಮಸೂದೆ ಜಾರಿಯಲ್ಲಿ ರಾಜಕೀಯ ಬೇಡ ಎಂದು ಮೇಲ್ಪಂಕ್ತಿ ಹಾಕಲು ಪ್ರಧಾನಿ ಅವರು ಮುಂದಾದರೆ ರಾಹುಲ್ ಗಾಂಧಿ ಹಾಗು ಮಿತ್ರರು ಸೇರಿ ಸೋಲಿಸಿದ್ದಾರೆ. ಪ್ರತಿಪಕ್ಷಗಳ ದ್ವಂದ್ವ ನೀತಿ ವಿರುದ್ಧ ಬಿಜೆಪಿಯಿಂದ ಹೋರಾಟ ಮುಂದುವರಿಯಲಿದೆ ಎಂದರು.

ಬಿಜೆಪಿ ಅವಕಾಶ ಸಿಕ್ಕಾಗಲೆಲ್ಲ ಮಹಿಳೆಯರಿಗೆ ಅವಕಾಶ, ಅಧಿಕಾರ ನೀಡಿದೆ. ದೇಶದಲ್ಲಿ ರಕ್ಷಣಾಮಂತ್ರಿ ಮಹಿಳೆಯಾಗಿದ್ದರು. ಹಾಲಿ ಹಣಕಾಸು ಸಚಿವರು ಮಹಿಳೆಯೇ ಆಗಿದ್ದಾರೆ. ದೇಶದ ಪ್ರಥಮ ಪ್ರಜೆ ಮಹಿಳೆಯೇ ಆಗಿದ್ದಾರೆ. ಸುಷ್ಮಾ ಸ್ವರಾಜ್ ವಿದೇಶಾಂಗ ಖಾತೆ ನಿಬಾಯಿಸಿದ್ದರು ಎಂದು ಹೇಳಿದರು.

ಮತ್ತೊಮ್ಮೆ ಕಾಂಗ್ರೆಸ್‌ನವರು ಆತ್ಮ ವಿಮರ್ಶೆ ಮಾಡಿಕೊಳ್ಳಬೇಕು. ಈ ವಿಚಾರದಲ್ಲಿ ಅವರಿಗೆ ಭಗವಂತ ಸದ್ಬುದ್ಧಿ ಕೊಡಲಿ ಎಂದು ಛೇಡಿಸಿದ ಅವರು, ಮಹಿಳೆಯರ ಬಗ್ಗೆ ಅಷ್ಟೊಂದು ಕಾಳಜಿ ಇದ್ದಿದ್ದರೆ ಮಸೂದಗೆ ಅಂಗೀಕಾರಕ್ಕೆ ಅಡ್ಡಿಪಡಿಸುತ್ತಿರಲಿಲ್ಲವೆಂದರು.

2011ರ ಜನಗಣತಿ ಆಧಾರದಡಿ ಕ್ಷೇತ್ರ ಪುನರ್ ವಿಂಗಡಣೆ ಮಾಡಿದರೆ ಕರ್ನಾಟಕದ ಲೋಕಸಭಾ ಕ್ಷೇತ್ರಗಳ ಸಂಖ್ಯೆ 42 ಆಗುತ್ತಿತ್ತು. ದಕ್ಷಿಣದ ರಾಜ್ಯಗಳಲ್ಲಿ ಪ್ರಸ್ತುತ 129 ಸಂಸದ ಸ್ಥಾನಗಳಿದ್ದು, 195ಕ್ಕೆ ಏರಿಕೆಯಾಗುತ್ತಿತ್ತು. ಆದರೆ ಹಾಲಿ ನಡೆಯುತ್ತಿರುವ ಜನಗಣತಿ ನಂತರ ಕ್ಷೇತ್ರ ಪುನರ್ ವಿಂಗಡಣೆ ಮಾಡಿದರೆ ದಕ್ಷಿಣ ಭಾರತದ ರಾಜ್ಯಗಳಿಗೆ ಅದೇ ಅನ್ಯಾಯ ಆಗಲಿದೆ ಎಂದು ಎಚ್ಚರಿಸಿದರು.

ಬಿಜೆಪಿ ಮಹಿಳಾ ಘಟಕದ ಮಾಜಿ ರಾಜ್ಯ ಉಪಾಧ್ಯಕ್ಷೆ ಸುಲೋಚನಾ ಭಟ್, ಶಾಸಕ ಸಿಮೆಂಟ್ ಮಂಜು, ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ನೇತ್ರಾವತಿ ಮಂಜುನಾಥ್, ಮಾಧ್ಯಮ ಪ್ರಮುಖ್ ಬಿ.ವೇದಾವತಿ, ಗಿರೀಶ್ ಹಾಜರಿದ್ದರು.




> 2028ರ ವಿಧಾನಸಭೆ ಚುನಾವಣೆಯಲ್ಲಿ ಹಾಸನ ಕ್ಷೇತ್ರದಿಂದ ನಾನೇ ಸ್ಪರ್ಧಿಸುತ್ತೇನೆ, ಅದರಲ್ಲಿ ಯಾವುದೇ ಅನುಮಾನ ಬೇಡ. ನಾನು 100 ಮೀಟರ್ ಓಟಗಾರನಲ್ಲ, ಮ್ಯಾರಾಥಾನ್ ಓಡಲು ಬಂದಿದ್ದು ನಿಧಾನಕ್ಕೆ ಗುರಿ ತಲುಪುತ್ತೇನೆ.
>
> – ಪ್ರೀತಂ ಗೌಡ, ಮಾಜಿ ಶಾಸಕ

### ನಿಖಿಲ್ ಹೇಳಿಕೆಗೆ ಹೆಚ್.ಡಿ.ಕೆ. ಪ್ರತಿಕ್ರಿಯೆ ಕೇಳಿ

ಬಿಜೆಪಿ-ಜೆಡಿಎಸ್ ಮೈತ್ರಿ ಕುರಿತು ನಿಖಿಲ್ ಕುಮಾರಸ್ವಾಮಿ ಅವರ ಸೈದ್ಧಾಂತಿಕ ಹೇಳಿಕೆಗೆ ಪ್ರತಿಕ್ರಿಯಿಸಿದ ಪ್ರೀತಂ ಗೌಡ, ಅವರ ಸಿದ್ಧಾಂತ ಅವರದು, ನಮ್ಮ ಸಿದ್ಧಾಂತ ನಮ್ಮದು. ನಮ್ಮ ಸಿದ್ಧಾಂತ ಒಪ್ಪಿದ ಮತದಾರರು ನಮ್ಮ ಜೊತೆಗಿದ್ದಾರೆ. ಹೆಚ್.ಡಿ.ಕುಮಾರಸ್ವಾಮಿ ಅವರು ಎನ್‌ಡಿಎ ನಾಯಕರಾಗಿದ್ದಾರೆ. ನಿಖಿಲ್ ಅವರ ಹೇಳಿಕೆಯನ್ನು ಅವರು ಒಪ್ಪುತ್ತಾರೆಯೇ ಕೇಳಿ ನೋಡಿ. ಮುಂದಿನ ಬಾರಿ ಎನ್‌ಡಿಎ ಅಭ್ಯರ್ಥಿಯೇ ಮುಖ್ಯಮಂತ್ರಿಯಾಗುವುದು ಖಚಿತ. ಮಹಾರಾಷ್ಟ್ರದಲ್ಲಿ ದೇವೇಂದ್ರ ಫಡ್ನವಿಸ್, ಬಿಹಾರದಲ್ಲಿ ಸಾಮ್ರಾಟ್ ಚೌದರಿಯಾದ ರೀತಿಯಲ್ಲಿ ಕರ್ನಾಟಕದಲ್ಲೂ ಯಾರಾದರೂ ಒಬ್ಬರು ಮುಖ್ಯಮಂತ್ರಿಯಾಗುತ್ತಾರೆ. ನಿಖಿಲ್ ಅವರು ಯುವಕರಿದ್ದು ತಮ್ಮ ಪಕ್ಷದ ಸಿದ್ಧಾಂತದ ಕುರಿತು ಮಾತನಾಡಿದ್ದಾರೆ. ಅವರಿಗೆ ಒಳ್ಳೆಯದಾಗಲಿ ಎಂದರು.

ರಾಷ್ಟ್ರೀಯ ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ನನ್ನ ಮನಸ್ಸಿನ ಇಚ್ಛೆಯನ್ನು ಸಾರ್ವಜನಿಕವಾಗಿ ಹೇಳಿಕೊಂಡರೆ ಆ ಸ್ಥಾನಕ್ಕೆ ಗೌರವ ಇರುವುದಿಲ್ಲ. ರಾಜಕಾರಣದ ಜೊತೆಗೆ ಸ್ಥಾನದ ಗೌರವ ಉಳಿಸಿಕೊಳ್ಳುವ ಅನಿವಾರ್ಯತೆ ಇದೆ ಎಂದರು.

### ಕಾಂಗ್ರೆಸ್ ಯಾವತ್ತಿಗೂ ಮಹಿಳಾಪರ: ಸಂಸದ ಶ್ರೇಯಸ್

ಹಾಸನ:ಮಹಿಳಾ ಮೀಸಲಾತಿ ಮಸೂದೆ ಜಾರಿಗೆ ಕಾಂಗ್ರೆಸ್ ನಾಯಕರು ವಿರೋಧ ಮಾಡಿಲ್ಲ ಎಂದು ಸಂಸದ ಶ್ರೇಯಸ್ ಪಟೇಲ್ ಸ್ಪಷ್ಟಪಡಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿಯ ತಮ್ಮ ಕೊಠಡಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕ್ಷೇತ್ರ ಮರುವಿಂಗಡಣೆ ಮಸೂದೆ ತರಲು ಮುಂದಾಗಿದ್ದನ್ನು ನಾವು ವಿರೋಧಿಸಿದ್ದೇವೆ ಎಂದು ಸ್ಪಷ್ಟಪಡಿಸಿದರು. ಕೇಂದ್ರದವರು ರಾಜ್ಯ ಸರ್ಕಾರದ ಪ್ರತಿನಿಧಿಗಳ ಸಭೆ ನಡೆಸಿಲ್ಲ, ಆದರೂ ನಾವು ವುಮೆನ್ ಬಿಲ್ ವಿರೋಧಿಸಿಲ್ಲ, ಬದಲಾಗಿ ಕ್ಷೇತ್ರ ಮರುವಿಂಗಡಣೆ ಕಾಯ್ದೆ ವಿರೋಧಿಸಿದ್ದೇವೆ ಎಂದು ಹೇಳಿದರು.

ಬಿಜೆಪಿ ಸಂವಿಧಾನ ತಿದ್ದುಪಡಿ ಮಾಡಲು ಯತ್ನಿಸಿತ್ತು, ಅದಕ್ಕೆ ನಾವು ಅವಕಾಶ ನೀಡಿಲ್ಲ. ಆದರೆ ಇಂಡಿಯಾ ಕೂಟ ಮಹಿಳಾ ಮೀಸಲಾತಿ ವಿರೋಧಿಸಿಲ್ಲ ಎಂದರು.

ಸರ್ವಪಕ್ಷಗಳ ಗಮನಕ್ಕೆ ತಾರದೇ ಮತ್ತೆ ಮಸೂದೆ ತರಲು ಹೊರಟರೆ ನಾವು ಮತ್ತೊಮ್ಮೆ ವಿರೋಧಿಸುತ್ತವೆ. 20 ವರ್ಷಕ್ಕೆ ಕ್ಷೇತ್ರ ಮರು ವಿಂಗಡಣೆ ಪ್ರಯತ್ನ ಮಾಡಿದ್ದಾರೆ. ವಾಸ್ತವವಾಗಿ 25 ವರ್ಷಕ್ಕೆ ಕ್ಷೇತ್ರ ಮರು ವಿಂಗಡಣೆ ಮಾಡಬೇಕಿದೆ. 2026 ರ ಜನಗಣತಿ ಮುಗಿದ ನಂತರ ಮಹಿಳಾ ಮೀಸಲಾತಿ ಮಸೂದೆ ಮಾಡಲಿ ಎಂದು ಸಲಹೆ ನೀಡಿದರು.

ಅಷ್ಟೇ ಅಲ್ಲ, ವಿಪಕ್ಷಗಳ ನಾಯಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಮಸೂದೆ ಮಂಡಿಸಲಿ. ರಾಜೀವ್ ಗಾಂಧಿ ಕನಸು ನನಸು ಮಾಡೋ ಕೆಲಸ ಮಾಡುತ್ತೇವೆ. ವಿಶೇಷ ಅಧಿವೇಶನ ಕರೆದು ವುಮೆನ್ ಬಿಲ್ ಮಂಡಿಸಿದ್ರೆ ಸಹಮತ ನೀಡುತ್ತೇವೆ ಎಂದು ಹೇಳಿದರು.

ಮಸೂದೆ ಪಾಸ್ ಆಗಲು 2/3 ರಷ್ಟು ಬಹುಮತ ಬೇಕು ಎಂಬುದು ಗೊತ್ತಿದೆ, ಆದರೂ ತರಾತುರಿಯಲ್ಲಿ ಮಂಡಿಸಿ, ಈಗ ವಿರೋಧ ಪಕ್ಷಗಳು ಟೀಕೆ ಟಿಪ್ಪಣಿ ಮಾಡುತ್ತಿವೆ, ಇಂಡಿಯಾ ಕೂಟ ಮಹಿಳಾ ವಿರೋಧಿಗಳು ಅಂತ ಬಿಂಬಿಸೋ ಯತ್ನ ನಡೆಸಲಾಗುತ್ತಿದೆ, ಇದು ಸಲ್ಲದು ಎಂದು ಆಕ್ರೋಶ ಹೊರ ಹಾಕಿದರು.



# ಪರಿಶ್ರಮವೇ ಸ್ವಾವಲಂಬನೆಗೆ ದಾರಿ: ಶಾಸಕ ಸಿಮೆಂಟ್ ಮಂಜು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ದುಡಿಯುವ ವರ್ಗದವರು ದುಶ್ಚಟಗಳಿಗೆ ದಾಸರಾಗಿ ಜೀವನ ಹಾಳು ಮಾಡಿಕೊಳ್ಳುವುದಕ್ಕಿಂತ ವೃತ್ತಿ ಕ್ಷೇತ್ರದಲ್ಲಿ ಹಠ ಹಾಗೂ ಪರಿಶ್ರಮದಿಂದ ದುಡಿದರೆ ಸ್ವಾವಲಂಬಿ ಜೀವನ ನಡೆಸಬಹುದು ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಪಟ್ಟಣದ ತಾಲೂಕು ಪಂಚಾಯಿತಿ ಆವರಣದಲ್ಲಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ವಿವಿಧ ವೃತ್ತಿ ಆಧಾರಿತ 69 ಕುಶಲಕರ್ಮಿಗಳಿಗೆ ಯಂತ್ರೋಪಕರಣ ವಿತರಿಸಿ ಮಾತನಾಡಿದರು.

ಸಮಾಜದ ಎಲ್ಲ ವರ್ಗದವರೂ ತಮ್ಮ ವೃತ್ತಿಗೆ ಅಗತ್ಯವಾದ ಸಾಧನಗಳನ್ನು ಪಡೆದು ಸ್ವಾವಲಂಬಿಗಳಾಗಬೇಕು. ಸರ್ಕಾರದಿಂದ ದೊರೆಯುವ ಸೌಲಭ್ಯಗಳನ್ನು ಸಕಾರಾತ್ಮಕವಾಗಿ ಬಳಸಿಕೊಂಡು ಆರ್ಥಿಕವಾಗಿ ಅಭಿವೃದ್ಧಿ ಹೊಂದುವಂತೆ ಮುಂದಾಗಬೇಕು ಎಂದು ಸಲಹೆ ನೀಡಿದರು.

ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಉಪ ನಿರ್ದೇಶಕ ರವಿಪ್ರಸಾದ್ ಮಾತನಾಡಿ, ಮರ ಕೆಲಸ, ಗಾರೆ ಕೆಲಸ, ಹೊಲಿಗೆ, ಧೋಬಿ, ಎಲೆಕ್ಟ್ರಿಕಲ್ ವೈರಿಂಗ್, ಮೋಟಾರ್ ರಿವೈಂಡಿಂಗ್ ಹಾಗೂ ಬೋರವೆಲ್ ದುರಸ್ತಿ ಸೇರಿ ವಿವಿಧ ಕ್ಷೇತ್ರಗಳಲ್ಲಿ ತೊಡಗಿರುವವರಿಗೆ ಸರ್ಕಾರದಿಂದ ನೆರವು ನೀಡಲಾಗುತ್ತಿದೆ ಎಂದರು.

ಆಯ್ಕೆಯಾದ ಫಲಾನುಭವಿಗಳಿಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಹಾಗೂ ಸಹಾಯಧನ ಒದಗಿಸಲಾಗುತ್ತಿದ್ದು, ಇದು ಅವರ ಉದ್ಯಮ ವಿಸ್ತರಣೆಗೆ ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕೈಗಾರಿಕಾ ವಿಸ್ತರಣಾ ಅಧಿಕಾರಿ ಆನಂದ್, ಇಲಾಖೆಯ ಅಧಿಕಾರಿಗಳು, ಸ್ಥಳೀಯ ಜನಪ್ರತಿನಿಧಿಗಳು ಹಾಗೂ ಫಲಾನುಭವಿಗಳು ಉಪಸ್ಥಿತರಿದ್ದರು.

# ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಿ: ಸಂಸದ ಶ್ರೇಯಸ್

## ಜಿಲ್ಲಾ ಮಟ್ಟದ ಸರ್ವೋತ್ತಮ ಪ್ರಶಸ್ತಿ ಪ್ರದಾನ । ನೌಕರರ ಕಾರ್ಯಕ್ಕೆ ಮೆಚ್ಚುಗೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸರ್ಕಾರಿ ಕಚೇರಿಗಳಿಗೆ ಬರುವ ಸಾರ್ವಜನಿಕರನ್ನು ಗೌರವಯುತವಾಗಿ ಕಾಣುವುದರ ಜೊತೆಗೆ ಕಾನೂನು ಚೌಕಟ್ಟಿನಲ್ಲಿ ಅವರ ಕೆಲಸ ಮಾಡಲು ಆದ್ಯತೆ ನೀಡಬೇಕೆಂದು ಸಂಸದ ಶ್ರೇಯಸ್ ಪಟೇಲ್ ಸೂಚಿಸಿದರು.

ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿ, ರಾಜ್ಯ ಸರ್ಕಾರಿ ನೌಕರರ ಸಂಘದಿಂದ ಹಾಸನಾಂಬ ಕಲಾಕ್ಷೇತ್ರದಲ್ಲಿ ಮಂಗಳವಾರ ಏರ್ಪಡಿಸಿದ್ದ ರಾಜ್ಯ ಸರ್ಕಾರಿ ನೌಕರರ ದಿನಾಚರಣೆ ಹಾಗೂ 2024-25ನೇ ಸಾಲಿನ ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ಸರ್ಕಾರಿ ನೌಕರರಲ್ಲಿ ತಾಳ್ಮೆ ಬಹುಮುಖ್ಯ. ಯಾವುದೇ ಒತ್ತಡವಿದ್ದರೂ ಅದನ್ನು ಸಂಭಾಳಿಸಿಕೊಂಡು ಮುಂದೆ ಸಾಗಬೇಕು ಎಂದರು.

ಯಾವುದೇ ಕೆಲಸವಾದರೂ ಸಹ ಪ್ರಾಮಾಣಿಕತೆಯಿಂದ ಮಾಡುವುದು ಅತಿ ಮುಖ್ಯ, ನೌಕರರು ಸಾರ್ವಜನಿಕರ ಧ್ವನಿಯಾಗಿ ಕೆಲಸ ಮಾಡಬೇಕು. ಜಿಲ್ಲೆ ಪ್ರಗತಿಯನ್ನು ಕಾಣಬೇಕು ಎಂದರೆ ಅದಕ್ಕೆ ಮುಖ್ಯ ಕಾರಣ ಹಾಸನ ಜಿಲ್ಲೆಯಲ್ಲಿ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿಗಳೇ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವುದರಿಂದ ಜಿಲ್ಲೆ ಎಲ್ಲದರಲ್ಲೂ ಉತ್ತಮ ಸ್ಥಾನದಲ್ಲಿದೆ ಎಂದು ತಿಳಿಸಿದರು.



ಶಾಸಕ ಹೆಚ್.ಪಿ.ಸ್ವರೂಪ್ ಮಾತನಾಡಿ, ಜಿಲ್ಲೆಯ ಸರ್ಕಾರಿ ನೌಕರರು ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿರುವುದರಿಂದ ಜಿಲ್ಲೆಯು ಪ್ರಗತಿ ಶೀಲವಾಗಿದೆ.ಯಾವುದೇ ಕೆಲಸವಾಗಿರಲಿ ಪ್ರಾಮಾಣಿಕವಾಗಿ ಮಾಡಿ ಕೆಲಸಕ್ಕೆ ಗೌರವ ನೀಡಬೇಕು. ನಾಗರಿಕರು ಮತ್ತು ಸಾರ್ವಜನಿಕರ ಕೆಲಸಕ್ಕೆ ಹೆಚ್ಚು ಒತ್ತು ನೀಡುವ ಮೂಲಕ ಸಹಕರಿಸಬೇಕು ಎಂದರು.

ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಮಾತನಾಡಿ ನಾವು ಮಾಡುವ ಕೆಲಸಕ್ಕೆ ಪ್ರಶಸ್ತಿ ಬೇಕಿಲ್ಲ, ಮಾಡುವ ಕೆಲಸದಲ್ಲಿ ಪ್ರಾಮಾಣಿಕತೆ ಇದ್ದರೆ ಸಾಕು. ಸಂವಿಧಾನದ ಚೌಕಟ್ಟಿನ ಒಳಗೆ ಕೆಲಸ ಮಾಡುವ ಸರ್ಕಾರಿ ನೌಕರರಿಗೆ ಪ್ರತಿ ದಿನವೂ ಹೊಸ ದಿನವಾಗಿರಬೇಕು. ಆದ್ದರಿಂದ ಉತ್ಸಾಹದಿಂದ ಕೆಲಸ ಮಾಡಿ ಎಂದು ಹೇಳಿದರು.

ಸಾರ್ವಜನಿಕರ ಸಮಸ್ಯೆಗಳನ್ನು ಅರ್ಥ ಮಾಡಿಕೊಂಡು ಸಮಸ್ಯೆಗೆ ಸೂಕ್ತವಾದ ಪರಿಹಾರವನ್ನು ಅಧಿಕಾರಿಗಳು ನೀಡಬೇಕು ಹಾಗೂ ಯಾವುದೇ ಕೆಲಸವಾದರೂ ಸಹ ಆ ಕೆಲಸದ ಮೇಲೆ ಶ್ರದ್ಧೆ, ಬದ್ಧತೆ ಮತ್ತು ನಿಷ್ಠೆ ಇರಬೇಕು ಎಂದರು.

ಕೆಲಸ ಮಾಡುವಾಗ ಯಾವ ಕೆಲಸವೂ ಸಣ್ಣ ಕೆಲಸ ದೊಡ್ಡ ಕೆಲಸ ಅಂತ ಇರುವುದಿಲ್ಲ ಎಲ್ಲಾ ಕೆಲಸವೂ ಒಂದೇ, ಕೆಲಸ ಯಾವುದೇ ಆಗಿರಲಿ ಮಾಡುವ ಹಂಬಲ ಪ್ರತಿಯೊಬ್ಬರಲ್ಲೂ ಇರಬೇಕು ಎಂದರು.

ನೌಕರರು ಕೆಲಸದ ಜವಾಬ್ದಾರಿಯನ್ನು ನಿರ್ವಹಿಸುವುದರ ಜೊತೆಗೆ, ತಮ್ಮ ಆರೋಗ್ಯದ ಕಡೆ ಹೆಚ್ಚು ಗಮನ ಹರಿಸಿಬೇಕು. ಆರೋಗ್ಯ ಸಮತೋಲನದಲ್ಲಿದ್ದರೆ ತಾವು ತೆಗೆದುಕೊಂಡ ನಿರ್ಧಾರ ಹಾಗೂ ನಿರ್ಣಾಯಗಳು ಕೂಡ ಸರಿಯಾಗಿರುತ್ತದೆ ಎಂದು ಹೇಳಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪಟೇಲ್ ಶಿವಪ್ಪ ಮಾತನಾಡಿ, ದೇಶ, ರಾಜ್ಯ, ಜಿಲ್ಲೆ ಅಭಿವೃದ್ಧಿ ಹೊಂದಬೇಕು ಎಂದರೆ ಸರ್ಕಾರಿ ನೌಕರರ ಪಾತ್ರ ತುಂಬಾ ಮುಖ್ಯ. ಸರ್ಕಾರಿ ನೌಕರರು ಸರ್ಕಾರದ ಎರಡು ಚಕ್ರ ಇದ್ದಂತೆ, ಉತ್ತಮ ನಡೆಯಬೇಕು ಎಂದರೆ ಸರ್ಕಾರಿ ನೌಕರರು ಕೆಲಸ ಮಾಡಬೇಕು ಆದ್ದರಿಂದ ಮೊದಲ ಆದ್ಯತೆ ನೌಕರರಿಗೆ ನೀಡಬೇಕು ಎಂದು ಹೇಳಿದರು.

ಜಿಲ್ಲಾ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಿ,ಪಿ.ಕೃಷ್ಣೇಗೌಡ ಮಾತನಾಡಿ, ನೌಕರರು ಅವರ ಮೊದಲ ಆದ್ಯತೆಯನ್ನು ಸಾರ್ವಜನಿಕರಿಗೆ ಮತ್ತು ನಾಗರಿಕರಿಗೆ ನೀಡಬೇಕು. ಸರ್ಕಾರಿ ನೌಕರರು ಸಾರ್ವಜನಿಕರ ಕೊಂಡಿಯಾಗಿ ಕೆಲಸ ಮಾಡಬೇಕು ಹಾಗೂ ಪ್ರಾಮಾಣಿಕತೆ, ದಕ್ಷತೆ, ತಾಳ್ಮೆ, ಶ್ರದ್ಧೆಯಿಂದ ಕರ್ತವ್ಯವನ್ನು ನಿರ್ವಹಿಸಬೇಕು ಎಂದು ಹೇಳಿದರು.

ಸಾರ್ವಜನಿಕರು ಸಮಸ್ಯೆಗಳಿಗೆ ಪ್ರತ್ಯಕ್ಷವಾಗಿ ಪರಿಹಾರ ನೀಡಲು ಸಾಧ್ಯವಾಗದಿದ್ದರೆ ಪರೋಕ್ಷವಾಗಿ ಪರಿಹಾರ ನೀಡಬೇಕು ಮತ್ತು ಸಾರ್ವಜನಿಕರ ಪರವಾಗಿ ಕೆಲಸ ಮಾಡಬೇಕು ಎಂದರು.

ಅಪರ ಜಿಲ್ಲಾಧಿಕಾರಿ ಜಗದೀಶ್ ಗಂಗಣ್ಣನವರ್, ತಹಶೀಲ್ದಾರ್ ಗೀತಾ ಹಾಗೂ ಮತ್ತಿತರರು ಉಪಸ್ಥಿತದ್ದರು.

# ಮಹಿಳೆಯರಿಗೆ ಇನ್ನೂ ಸಿಗದ ಪ್ರಾತಿನಿಧ್ಯ: ಶೇಖರ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಜ್ಞಾನ, ವಿಜ್ಞಾನ ಉತ್ತುಂಗ ಶಿಖರ ತಲುಪಿದ ಕಾಲಘಟ್ಟದಲ್ಲಿಯೂ ಮಹಿಳೆಗೆ ಸಮಾನ ಅವಕಾಶ ದೊರೆಯದಿರುವುದು ದುರದೃಷ್ಟಕರ ಸಂಗತಿ ಎಂದು ತಾಲ್ಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಶೇಖರ್ ಸಂಕೋಡನಹಳ್ಳಿ ಹೇಳಿದರು.

ನಗರದ ವಿವೇಕಾನಂದ ಬಿಇಡಿ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಬಸವ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, 12ನೇ ಶತಮಾನದಲ್ಲಿ ಜಾತಿ, ಮತ, ಪಂಥ ಬೇಧವಿಲ್ಲದೆ ಸರ್ವ ಸಮುದಾಯಗಳನ್ನು ತನ್ನೊಟ್ಟಿಗೆ ಕರೆದೊಯ್ದು ಮಹಾ ಪುರುಷ ಬಸವಣ್ಣ. ಅನುಭವ ಮಂಟಪದಲ್ಲಿ ಸ್ತ್ರೀ, ಪುರುಷರೆನ್ನದೇ ಸಮಾನ ಅವಕಾಶ ಕಲ್ಪಿಸಿದ್ದರು. ಆದರೆ ಆಧುನಿಕ ಯುಗದಲ್ಲಿ ಮೀಸಲಾತಿ ವಿಷಯ ಪದೇ ಪದೆ ಕೇಳಿ ಬರುತ್ತಿದ್ದು ನ್ಯಾಯ ಒದಗಿಸಲು ಪ್ರಯತ್ನ ನಡೆಸಬೇಕಿದೆ. ಸಮ ಸಮಾಜದ ಕನಸು ಕಂಡ ಮಹನೀಯರ ಜಯಂತಿ ಆಚರಣೆಗೆ ಸರ್ಕಾರ ಮುಂದಾಗಿರುವುದು ಶ್ಲಾಘನೀಯ. ಇಂಗ್ಲೆಂಡ್‌ನ ಥೇಮ್ಸ್ ನದಿಯ ತಟದಲ್ಲಿ ಬಸವೇಶ್ವರರ ಪುತ್ಥಳಿ ಅನಾವರಣ ಮಾಡಿರುವುದು ಬಸವಣ್ಣ ಅವರ ಹಿರಿಯಮೆಯನ್ನು ಎತ್ತಿ ತೋರಿಸುತ್ತದೆ ಎಂದರು. ವಿವೇಕಾನಂದ ಶಿಕ್ಷಣ ಮಹಾ ವಿದ್ಯಾಲಯದ ಪ್ರಾಂಶುಪಾಲ ಡಾ.ಮಲ್ಲಿಕಾರ್ಜುನ ಬಿ.ಕುಡವಕ್ಕಲಗಿ ಮಾತನಾಡಿ, ಮನುಕುಲದ ಉದ್ಧಾರಕ್ಕಾಗಿ ಶ್ರಮಿಸಿದ ಮಹನೀಯರ ಸ್ಮರಣೆ ಔಚಿತ್ಯಪೂರ್ಣ. ಸಮಾಜದ ಅಂಕು ಡೊಂಕುಗಳನ್ನು ತಿದ್ದುವ ಕಾರ್ಯ 12ನೇ ಶತಮಾನದ ವಚನಕಾರರ ಆದ್ಯತೆಯಾಗಿತ್ತು. ತಮ್ಮ ವಚನಗಳ ಮೂಲಕವೇ ಸಾಮಾಜಿಕ ಹೊಣೆಗಾರಿಕೆ, ಕಾಯಕದಲ್ಲಿ ಶ್ರದ್ಧೆ ಮೊದಲಾದ ವಿಚಾರಗಳನ್ನು ಪ್ರಸ್ತಾಪ ಮಾಡಿದ್ದಾರೆ ಎಂದರು.





# ಅರಕಲಗೂಡಿನಲ್ಲಿ ಶಂಕರ ಜಯಂತಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ಪಟ್ಟಣದ ಕೋಟೆ ಅಮೃತೇಶ್ವರ ಸ್ವಾಮಿ ದೇವಾಲಯದಲ್ಲಿರುವ ಶಂಕರಾಲಯದಲ್ಲಿ ಮಂಗಳವಾರ ಶಂಕರ ಜಯಂತಿಯನ್ನು ವಿಪ್ರ ಸಮಾಜದವರು ಶ್ರದ್ಧಾ ಭಕ್ತಿಯಿಂದ ಆಚರಿಸಿದರು. ಶಂಕರ ಮೂರ್ತಿಗೆ ಬೆಳಿಗ್ಗೆ ರುದ್ರಾಭಿಷೇಕ ಹಾಗು ವಿವಿಧ ಪೂಜಾ ಕಾರ್ಯಗಳನ್ನು ನಡೆಸಲಾಯಿತು. ಬಳಿಕ ಶಿವ, ಪಾರ್ವತಿಯರ ಉತ್ಸವ ಮೂರ್ತಿಗಳೊಂದಿಗೆ ಶಂಕರಾಚಾರ್ಯರ ಭಾವಚಿತ್ರವನ್ನು ಇಟ್ಟು ರಥ ಬೀದಿಯಲ್ಲಿ ರಥೋತ್ಸವ ನಡೆಸಲಾಯಿತು.

ರಥ ಸ್ವಸ್ಥಾನ ಸೇರಿದ ಬಳಿಕ ಮಹಾಮಂಗಳಾರತಿ ಪ್ರಸಾದ ವಿನಿಯೋಗ ನಡೆಸಲಾಯಿತು. ಭಕ್ತರಿಗೆ ಅನ್ನ ಸಂತರ್ಪಣೆ ಏರ್ಪಡಿಸಲಾಗಿತ್ತು. ಬ್ರಾಹ್ಮಣ ಸಮಾಜದ ಅಧ್ಯಕ್ಷ ನರಸಿಂಹ ಮೂರ್ತಿ, ಕಾರ್ಯದರ್ಶಿ ಜಿ. ರಮೇಶ್, ಮುಖಂಡರಾದ ಎ.ಎನ್.ಗಣೇಶಮೂರ್ತಿ, ಕೃಷ್ಣಮೂರ್ತಿ, ವಿಪ್ರ ಮಹಿಳಾ ಬಳಗದ ಅಧ್ಯಕ್ಷೆ ರುಕ್ಮಿಣಿ ಉಪಸ್ಥಿತರಿದ್ದರು.



# ಮನುಕುಲದ ಉದ್ಧಾರಕ್ಕೆ ಶ್ರಮಿಸಿದ ಬಸವಣ್ಣ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ಅನುಭವ ಮಂಟಪದ ಮೂಲಕ ಇಡೀ ಮನುಕುಲದ ಉದ್ಧಾರಕ್ಕಾಗಿ, ಸರ್ವರ ಕಲ್ಯಾಣಕ್ಕಾಗಿ, ಮನುಷ್ಯ ಜಾತಿ ಒಂದೇ ಎಂದು ಪ್ರಜಾಪ್ರಭುತ್ವ ವ್ಯವಸ್ಥೆ ಜಾರಿಗೆ ತಂದ ಕೀರ್ತಿ ಮತ್ತು ಶ್ರೇಯಸ್ಸು ಬಸವಣ್ಣನವರಿಗೆ ಸಲ್ಲುತ್ತದೆ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ತಿಳಿಸಿದರು.

ಪಟ್ಟಣದ ಮಿನಿ ವಿಧಾನಸೌಧದ ಆವರಣದಲ್ಲಿ ತಾಲೂಕು ಆಡಳಿತ ಹಾಗೂ ವೀರಶೈವ ಲಿಂಗಾಯತ ಮಹಾಸಭಾ ತಾಲೂಕು ಘಟಕದ ವತಿಯಿಂದ ಆಯೋಜಿಸಿದ್ದ ಜಗಜ್ಯೋತಿ ಬಸವೇಶ್ವರರ ಜಯಂತ್ಯುತ್ಸವದಲ್ಲಿ ಬಸವಣ್ಣನ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.

ಹನ್ನೆರಡನೇ ಶತಮಾನದ ಕ್ರಾಂತಿ ಪುರುಷ ಬಸವಣ್ಣ ವಿಶ್ವದಲ್ಲೇ ಮೊದಲ ಬಾರಿಗೆ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಜಾರಿ ಮಾಡಿದ ಪುಣ್ಯ ಪುರುಷರಾಗಿದ್ದಾರೆ. ಜಾತಿ, ಧರ್ಮ, ಮತ ಭೇದ ಮರೆತು ಮನುಷ್ಯ ಜಾತಿಯನ್ನು ಒಗ್ಗೂಡಿಸಿ ಎಲ್ಲರೂ ಒಂದೇ ಎಂಬ ಸಂದೇಶ ಸಾರಿದರು. ಅನುಭವ ಮಂಟಪ ಎಂಬ ಸಂಸತ್ ರಚನೆ ಮಾಡಿ ಇಡೀ ವಿಶ್ವಕ್ಕೆ ಮಾದರಿಯಾಗಿದ್ದ ಬಸವಣ್ಣ ಇಂದಿಗೂ ಪ್ರಸ್ತುತರಾಗುತ್ತಾರೆ. ಇವರ ಚಿಂತನೆಗಳೇ ಕ್ರಾಂತಿಕಾರಿಯಾಗಿತ್ತು. ಇಡೀ ಸಮಾಜವನ್ನು ಸಮಸಮಾಜ ಮಾಡುವತ್ತ ಇದ್ದ ಇವರ ಕಾಳಜಿ ಇಡೀ ವಿಶ್ವಕ್ಕೆ ಮಾದರಿಯಾಗಿದೆ ಎಂದು ಹೇಳಿದರು.

ಮುಂದಿನ ದಿನಗಳಲ್ಲಿ ಮೇಗಲಕೇರಿಯ ಬಸವೇಶ್ವರ ವೃತ್ತದಲ್ಲಿ ಜಗಜ್ಯೋತಿ ಬಸವೇಶ್ವರ ಪುತ್ಥಳಿಯನ್ನು ಪ್ರತಿಷ್ಠಾಪಿಸಲು ಕ್ರಮ ಕೈಗೊಳ್ಳಲಾಗುವುದೆಂದು ಭರವಸೆ ನೀಡಿದರು.

ಶಿರಸ್ತೇದಾರ್ ಪವನ್, ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಅಧ್ಯಕ್ಷ ಹಡೇನಹಳ್ಳಿ ಲೋಕೇಶ್, ಕೆಡಿಪಿ ಸದಸ್ಯ ಮಹೇಶ್ ಕಬ್ಬಾಳು, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಮಂಜುನಾಥ್, ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎಲ್.ಪಿ.ಪ್ರಕಾಶ್‌ಗೌಡ, ನಗರ ಯೋಜನ ಪ್ರಾಧಿಕಾರದ ಅಧ್ಯಕ್ಷ ಜಿ.ಆರ್. ಮೂರ್ತಿ, ವೀರಶೈವ ಲಿಂಗಾಯಿತ ಮಹಾಸಭಾ ಜಿಲ್ಲಾಧ್ಯಕ್ಷ ನವಿಲೆ ಪರಮೇಶ್, ನಿರ್ದೇಶಕ ಎ.ಪಿ.ನಂದೀಶ, ಖಜಾಂಚಿ ಎಂ.ಎಸ್. ಸುರೇಶ್, ಯುವ ಘಟಕದ ನಿರ್ದೇಶಕರಾದ ಟಿ.ಪಿ.ಮಂಜುನಾಥ, ಎಂ.ಎಸ್.ಸತೀಶ್, ಸಮಾಜದ ಮುಖಂಡರಾದ ನಿವೃತ್ತ ಶಿಕ್ಷಕ ಸಿದ್ದೇಶ್, ಪ್ರಭುಸ್ವಾಮಿ ಉಪಸ್ಥಿತರಿದ್ದರು.

# ಆಟೋ ಚಾಲಕನ ಮಗಳಿಗೆ 585 ಅಂಕ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಕಡುಬಡತನದಲ್ಲಿ ಓದಿದ ಆಟೋ ಚಾಲಕನ ಮಗಳು ದ್ವಿತೀಯ ಪಿಯು ಪರೀಕ್ಷೆಯಲ್ಲಿ 600ಕ್ಕೆ 585 ಅಂಕ ಪಡೆದಿದ್ದು ಆಟೋ ಚಾಲಕರ ಸಂಭ್ರಮಕ್ಕೆ ಕಾರಣರಾಗಿದ್ದಾರೆ.

ಸಾಲಗಾಮೆಯ ಕುಮಾರ್ ಹಾಗೂ ಲತಾ ಅವರ ಪುತ್ರಿ ಎಸ್.ವಿ.ಯಶು ನಗರದ ಎಪಿಜೆ ಪಿಯು ಕಾಲೇಜಿನಲ್ಲಿ ವ್ಯಾಸಂಗ ಮಾಡಿದ್ದಾರೆ. ವಿಜ್ಞಾನ ವಿಭಾಗದಲ್ಲಿ 585 ಅಂಕ ಪಡೆದು ಕಾಲೇಜಿಗೆ ದ್ವಿತೀಯ ಸ್ಥಾನ ಪಡೆದಿದ್ದಾರೆ. ನಗರದ ಆರ್.ಸಿ.ರಸ್ತೆ ವೃತ್ತದಲ್ಲಿರುವ ಶ್ರೀ ಶಿವಕುಮಾರ ಸ್ವಾಮೀಜಿ ಆಟೋ ಚಾಲಕರು ಹಾಗೂ ಮಾಲೀಕರ ಸಂಘದಿಂದ ವಿದ್ಯಾರ್ಥಿನಿಗೆ ಸೋಮವಾರ ಸನ್ಮಾನಿಸಲಾಯಿತು.

ವಿದ್ಯಾರ್ಥಿನಿಯ ತಂದೆ ಕುಮಾರ್ ಮಾತನಾಡಿ, 1995 ರಿಂದ ಆಟೋ ಚಾಲಕನಾಗಿ ಕೆಲಸ ಮಾಡುತ್ತಿದ್ದೇನೆ. ಆರ್ಥಿಕವಾಗಿ ಕುಟುಂಬ ಸದೃಢವಾಗಿಲ್ಲವಾದರೂ ಕಷ್ಟಪಟ್ಟು ದುಡಿದು ಮಗಳಿಗೆ ಒಳ್ಳೆಯ ಶಿಕ್ಷಣ ಕೊಡಿಸಿದ್ದೇನೆ. ಅವಳು ಸಹ ನಮ್ಮ ಭರವಸೆ ಹುಸಿಯಾಗದಂತೆ ಉತ್ತಮ ಅಂಕ ಗಳಿಸಿದ್ದಾಳೆ. ನನ್ನ ಮಗಳ ಏಳಿಗೆಯಲ್ಲಿ ಆಟೋ ಚಾಲಕ ಸ್ನೇಹಿತರ ಸಹಕಾರವೂ ಹೆಚ್ಚಿದೆ ಎಂದು ಭಾವುಕರಾದರು.

ವಿದ್ಯಾರ್ಥಿನಿ ಎಸ್.ವಿ.ಯಶು ಮಾತನಾಡಿ, ನಿರಂತರ ಪರಿಶ್ರಮ ಹಾಗೂ ತಾಳ್ಮೆ ಇದ್ದರೆ ಜೀವನದಲ್ಲಿ ಯಶಸ್ಸು ಗಳಿಸಬಹುದು. ಮನೆಯಲ್ಲಿ ಯಾವುದೇ ಸಮಸ್ಯೆಯಾಗದಂತೆ ತಂದೆ-ತಾಯಿ ನೋಡಿಕೊಂಡರು. ಕಷ್ಟಗಳ ನಡುವೆಯೂ ನನ್ನ ವಿದ್ಯಾಭ್ಯಾಸಕ್ಕೆ ಯಾವ ಕೊರತೆಯಾಗದಂತೆ ಸಹಕರಿಸಿದರು. ಅವರ ನೆರವಿನಿಂದ ಇಷ್ಟೆಲ್ಲಾ ಸಾಧ್ಯವಾಗಿದೆ. ಬಿಎಸ್‌ಸಿ (ಅಗ್ರಿ) ಪದವಿ ಮಾಡುವ ಗುರಿ ಹೊಂದಿದ್ದೇನೆ ಎಂದು ತಿಳಿಸಿದರು.

ಯಶು ಅವರ ತಾಯಿ ಲತಾ, ಆಟೋ ಚಾಲಕರು ಮತ್ತು ಮಾಲೀಕರ ಸಂಘದ ಗೌರವಾಧ್ಯಕ್ಷ ಚಂದ್ರಶೇಖರ್, ಕಾರ್ಯದರ್ಶಿ ವಸಂತ್, ಜಾನಿ, ಮೋಹನ್, ಅಬ್ಬಾಸ್ ಇತರರಿದ್ದರು.

# ಆಧ್ಯಾತ್ಮಿಕ ತಾಣಗಳಿಂದ ನೆಮ್ಮದಿ-ಮನಃಶಾಂತಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ದೇವಾಲಯ, ಮಠ, ಮಂದಿರಗಳು ನೆಮ್ಮದಿ ಹಾಗೂ ಮನಃಶಾಂತಿ ನೀಡುವ ಆಧ್ಯಾತ್ಮಿಕ ಕೇಂದ್ರಗಳು ಎಂದು ಹಾಸನ-ಕೊಡಗು ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಹೇಳಿದರು.

ತಾಲೂಕಿನ ಗಂಡಸಿ ಹೋಬಳಿ ರಾಂಜೀಹಳ್ಳಿ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಕಾಲಭೈರವೇಶ್ವರ ಸ್ವಾಮಿ ದೇವಾಲಯದ ಲೋಕಾರ್ಪಣೆ ಕಾರ್ಯಕ್ರಮದ ಧಾರ್ಮಿಕ ಸಮಾರಂಭದಲ್ಲಿ ಆಶೀರ್ವಚನ ನೀಡಿದರು.

ಗುರು ಹಿರಿಯರ ಮಾರ್ಗದರ್ಶನ, ಮಠ ಮಂದಿರಗಳಂತಹ ಆಧ್ಯಾತ್ಮಿಕ ತಾಣಗಳು ನಮ್ಮ ಸುತ್ತಮುತ್ತ ಇದ್ದರೆ ಪ್ರತಿಯೊಬ್ಬ ಮನುಷ್ಯನ ಬದುಕು ಸಾರ್ಥಕತೆಯಿಂದ ಕೂಡಿರುತ್ತದೆ.

ಅಂತಹ ಸಾರ್ಥಕತೆಯ ಕಾರ್ಯವನ್ನು ಕಾಲಭೈರವೇಶ್ವರ ಸ್ವಾಮಿಯ ದೇವಾಲಯ ನಿರ್ಮಾಣ ಮಾಡುವುದರ ಮೂಲಕ ಗ್ರಾಮಸ್ಥರು ಹಾಗೂ ಭಕ್ತರು ಧನ್ಯರಾಗಿದ್ದು, ಈ ರೀತಿಯ ಧಾರ್ಮಿಕ ಭಾವನೆಯ ಮನಸ್ಥಿತಿ ಇತರರಿಗೆ ಆದರ್ಶವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ದೇವಾಲಯದಲ್ಲಿ ವಿರಾಜಮಾನನಾಗಿ ಪ್ರತಿಷ್ಠಾಪನೆಗೊಂಡಿರುವ ಕಾಲಭೈರವೇಶ್ವರ ಸ್ವಾಮಿಯು ತನ್ನ ಭಕ್ತರನ್ನು ಹಾಗೂ ಗ್ರಾಮಸ್ಥರನ್ನು ಹಗಲಿರುಳು ಕಾಯಲಿ, ನಿಮ್ಮೆಲ್ಲರ ಮನದ ಇಷ್ಟಾರ್ಥ ಈಡೇರಿಸಲಿ ಎಂದು ಗ್ರಾಮಸ್ಥರಿಗೆ ಆಶೀರ್ವದಿಸಿದರು.

ಶ್ರೀಗಳ ಆಶೀರ್ವಚನಗಳೊಂದಿಗೆ ಕಳೆದ ಎರಡು ದಿನಗಳಿಂದ ದೇವಾಲಯದ ಲೋಕಾರ್ಪಣೆ ಅಂಗವಾಗಿ ನಡೆಯುತ್ತಿದ್ದ ಧಾರ್ಮಿಕ ಕಾರ್ಯಕ್ರಮಗಳು ಸಂಪನ್ನಗೊಂಡವು.

ಕಾರ್ಯಕ್ರಮದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಮಾಜಿ ನಿರ್ದೇಶಕ ರಾಮಚಂದ್ರ, ಗ್ರಾಮ ಪಂಚಾಯತಿ ಮಾಜಿ ಸದಸ್ಯ ಪ್ರಸನ್ನ, ಕೊಪ್ಪಲು ಪುಟ್ಟಸ್ವಾಮಿ, ಹೊಸಳ್ಳಿ ಬಾಲು, ಮುಖಂಡರಾದ ಭೈರಪ್ಪ ಮೊದಲಾದವರಿದ್ದರು.

# ಮತ್ತೊಂದು ಹೆಣ್ಣಾನೆಗೆ ರೇಡಿಯೋ ಕಾಲರ್ ಅಳವಡಿಕೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರೇಹಳ್ಳಿ: ಬೇಲೂರು ತಾಲೂಕಿನ ಅರೇಹಳ್ಳಿ ಹೋಬಳಿ ವ್ಯಾಪ್ತಿಯಲ್ಲಿ ಅರಣ್ಯ ಇಲಾಖೆ ವತಿಯಿಂದ ಕೈಗೊಳ್ಳಲಾಗಿದ್ದ ಕಾಡಾನೆಗಳ ಕಾರ್ಯಾಚರಣೆಯ ಅಂತಿಮ ಘಟ್ಟವಾದ ಸೋಮವಾರ ಹೆಣ್ಣಾನೆಗೆ ರೇಡಿಯೋ ಕಾಲರ್ ಅಳವಡಿಸುವುದರ ಮೂಲಕ ಮುಕ್ತಾಯಗೊಂಡಿದೆ.

ಭಾನುವಾರ ಕಾನಹಳ್ಳಿ ಅರಣ್ಯದಲ್ಲಿ ತಪ್ಪಿಸಿಕೊಂಡಿದ್ದ ಹೆಣ್ಣಾನೆಗೆ ರೇಡಿಯೋ ಕಾಲರ್ ಅಳವಡಿಸಲು ಅರಣ್ಯಾಧಿಕಾರಿಗಳು ಸೋಮವಾರ ಸಿಬ್ಬಂದಿಗಳೊಂದಿಗೆ ತೆರಳಿ ಕಾಡಾನೆ ಇರುವ ಸ್ಥಳವನ್ನು ಪತ್ತೆ ಹಚ್ಚುವಲ್ಲಿ ಯಶಸ್ವಿಯಾದರು. ಕಾನಹಳ್ಳಿ ಅರಣ್ಯ ಪ್ರದೇಶದ ಹತ್ತಿರದಲ್ಲಿರುವ ಶಿರಗುರ ಎಂಬಲ್ಲಿ ಕಾಡಾನೆಯನ್ನು ಪತ್ತೆ ಹಚ್ಚಲಾಯಿತು. ಆನೆಯನ್ನು ಅನುಭವಿ ವೈದ್ಯರ ತಂಡ ಹಿಂಬಾಲಿಸಿತ್ತು. ಶಿರಗುರದಲ್ಲಿ ಬೆಳಿಗ್ಗೆ 8.30ಕ್ಕೆ ಪತ್ತೆಯಾದ ಕಾಡಾನೆಯು ಒಂದೆಡೆ ನಿಲ್ಲದೇ ನೇರಲಕಟ್ಟೆ, ಕುಂಬಾರಹಳ್ಳಿ, ಶಿರಗುರ, ಸೂಳೇಗುಡ್ಡಕ್ಕೆ ತೆರಳಿತು. ಅದರಿಂದ ಸಿಬ್ಬಂದಿ ಹೈರಾಣಾದರು. ಕೊನೆಗೆ ನೇರಲಮಕ್ಕಿಯ ಕಾನಹಳ್ಳಿ ಅರಣ್ಯ ಪ್ರದೇಶಕ್ಕೆ ಕಾಡಾನೆಗೆ ಚುಚ್ಚುಮದ್ದು ನೀಡಿ ರೇಡಿಯೋ ಕಾಲರ್ ಅಳವಡಿಸಿದರು.

ಸತತವಾಗಿ ನಾಲ್ಕು ದಿನಗಳಿಂದ ಕಾಡಾನೆ ಹಿಡಿಯುವ ಹಾಗೂ ರೇಡಿಯೋ ಕಾಲರ್ ಅಳವಡಿಸುವ ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದ ಸಾಕಾನೆಗಳಾದ ಭೀಮ, ಶ್ರೀಕಂಠ ಆನೆಗಳನ್ನು ಮತ್ತಿಗೋಡು ಶಿಬಿರಕ್ಕೆ ಹಾಗೂ ಹರ್ಷ, ಧನಂಜಯ, ಶ್ರೀರಾಮ, ಅಯ್ಯಪ್ಪ ಎಂಬ ಆನೆಗಳನ್ನು ದುಬಾರೆಯ ಶಿಬಿರಕ್ಕೆ ವಾಪಾಸ್ ಕಳುಹಿಸಲಾಯಿತು.

ಕಾರ್ಯಾಚರಣೆಯಲ್ಲಿ ಡಿಎಫ್‌ಒ ಸೌರಭ್ ಕುಮಾರ್, ಎಸಿಎಫ್ (ಇಟಿಎಫ್) ಉಮಾಪತಿ, ಆರ್‌ಎಫ್‌ಒ ಯತೀಶ್ ಹಾಗೂ ಸಿಬ್ಬಂದಿ ಇದ್ದರು.

# ಬೇಡರ ಜಗಲಿಯಲ್ಲಿ ಅಂಬೇಡ್ಕರ್ ಜಯಂತಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ತಾಲೂಕಿನ ಬೇಡಡರ ಜಗಲಿ ಗ್ರಾಮದಲ್ಲಿ ಡಾ.ಬಿ.ಆರ್ ಅಂಬೇಡ್ಕರ್ ಅವರ 135ನೇ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಉಪನ್ಯಾಸಕ ಕುಶಾಲ್ ಮಾತನಾಡಿ, ಅಂಬೇಡ್ಕರ್ ಅವರ ಜೀವನ ಹಾಗೂ ಹೋರಾಟ ಜೊತೆಗೆ ಸಾಂಸ್ಕೃತಿಕ ಹಾಗೂ ಸಂಸ್ಕಾರದ ಮೌಲ್ಯದೊಂದಿಗೆ ಬೆಳೆದ ಅಂಬೇಡ್ಕರ್ ಅವರ ಜೀವನ ನಮ್ಮೆಲ್ಲರಿಗೂ ಪ್ರೇರಣೆಯಾಗಿದೆ. ಅವರ ನಡೆ ನುಡಿ ಪ್ರತಿಯೊಬ್ಬರಿಗೂ ಮಾದರಿಯಾಗಿದೆ. ಪ್ರತಿ ತಂದೆ ತಾಯಿಯರು ಮಕ್ಕಳನ್ನು ಆ ರೀತಿ ಬೆಳೆಸಬೇಕು. ಜಾತಿ ವ್ಯವಸ್ಥೆಯ ಸಮಾಜದೊಳಗೆ ಜಾತಿಯನ್ನು ತಿಳಿದುಕೊಂಡು ಬದುಕುವುದು ಬಹು ಮುಖ್ಯವಾದದು ಎಂದು ತಿಳಿಸಿದರು.

ಶಿಕ್ಷಕಿ ಮಲ್ಲಿಗೆಯಮ್ಮ ಮಾತನಾಡಿ, ು ಬಾಬಾ ಸಾಹೇಬ್ ಅಂಬೇಡ್ಕರ್ ಮಹಿಳೆಯರಿಗೆ ನೀಡಿದ ಹಕ್ಕು ಅಧಿಕಾರ ಮತದಾನದ ಹಾಗು ಸಾಂವಿಧಾನಿಕ ಮೌಲ್ಯ ಬಗ್ಗೆ ತಿಳಿಸಿಕೊಟ್ಟರು.

ಉಪನ್ಯಾಸಕ ರಾಜಶೇಖರ್ ಪ್ರಸ್ತಾವಿಕವಾಗಿ ಮಾತನಾಡಿ, ಕಾರ್ಯಕ್ರಮದ ರೂಪುರೇಷೆ, ಅಂಬೇಡ್ಕರ್ ಪಾಲಿಸಿದ ವಿದ್ಯೆ, ಸ್ವಾಭಿಮಾನದ ಬಗ್ಗೆ ತಿಳಿಸಿಕೊಟ್ಟರು. ಮುಖಂಡರಾದ ಶಾಂತರಾಜ್ ಅವರು ಅಧ್ಯಕ್ಷತೆ ವಹಿಸಿದ್ದರು. ಸೋಮಣ್ಣ, ಮನೋಜ್, ಶಶಾಂಕ್ ಹಾಗು ಕಲ್ಲನಕೋಡಿ, ಬ್ಯಾಡರ ಜಗಲಿ, ಕೆಳಹಟ್ಟಿ ಗ್ರಾಮಸ್ಥರು ಹಾಜರಿದ್ದರು.

# ದಾರ್ಶನಿಕರ ತತ್ತ್ವದರ್ಶ ಅಳವಡಿಸಿಕೊಂಡರೆ ಸುಂದರ ಬದುಕು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ಮಹಾಪುರುಷರು ಯಾವುದೇ ಒಂದು ಸಮುದಾಯಕ್ಕೆ ಸೀಮಿತರಲ್ಲ, ಸಮಾಜದ ಅಭ್ಯುದಯಕ್ಕಾಗಿಕ್ಕೆ ಶ್ರಮಿಸಿದ ಇವರ ಜಯಂತಿಯನ್ನು ಎಲ್ಲ ಸಮುದಾಯವರೂ ಒಟ್ಟಾಗಿ ಆಚರಿಸಿದಾಗ ಮಾತ್ರ ಮುಂದಿನ ಪೀಳಿಗೆಗೆ ದಾರಿದೀಪವಾಗುತ್ತದೆ ಎಂದು ಶಾಸಕ ಎ. ಮಂಜು ತಿಳಿಸಿದರು.

ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ಬಸವೇಶ್ವರ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಬಸವಣ್ಣ, ಬುದ್ಧ, ಕುವೆಂಪು, ಅಂಬೇಡ್ಕರ್ ಅವರಂತಹ ಸಮಾಜ ಸುಧಾರಕರನ್ನು ಯಾವುದೇ ಸಮುದಾಯ, ಜಾತಿಗಳಿಗೆ ಸೀಮಿತ ಗೊಳಿಸಬಾರದು, 12 ನೇ ಶತಮಾನದಲ್ಲೆ ಜಾತ್ಯಾತೀತ ಸಮಾಜದ ಕನಸು ಕಂಡ ಬಸವಣ್ಣನವರು ಕ್ರಾಂತಿಯನ್ನೆ ಮಾಡಿದ್ದರು. ವಿದ್ಯಾಂತರಾದಂತೆ ಜಾತೀಯತೆಯೂ ಹೆಚ್ಚುತ್ತಿರುವುದು ವಿಷಾದಕರ ಸಂಗತಿ, ಬಸವಣ್ಣನವರ ಆದರ್ಶಗಳನ್ನು ಮೈಗೂಡಿಸಿಕೊಂಡು ಉತ್ತಮ ಸಮಾಜ ನಿರ್ಮಿಸಲು ಮುಂದಾಗಬೇಕಿದೆ ಎಂದರು.

ತಾಲ್ಲೂಕು ವೀರಶೈವ ಲಿಂಗಾಯಿತ ಸಮಾಜದ ಅಧ್ಯಕ್ಷ ದೊಡ್ಡಬೆಮ್ಮತ್ತಿ ಸುರೇಶ್ ಮಾತನಾಡಿ, ಶೀಘ್ರದಲ್ಲೆ ಬಸವಣ್ಣನವರ ಜಯಂತಿಯನ್ನು ಅದ್ದೂರಿಯಾಗಿ ಹಮ್ಮಿಕೊಳ್ಳುತ್ತಿದ್ದು ಅಂದು ಸಮುದಾಯ ಭವನ ನಿರ್ಮಾಣ ಹಾಗೂ ಬಸವಣ್ಣನವರ ಪುತ್ಥಳಿ ನಿರ್ಮಾಣ ಕಾರ್ಯಗಳಿಗೆ ಚಾಲನೆ ನೀಡಲಾಗುವುದು ಎಂದರು. ಪ್ರೌಢಶಾಲಾ ಶಿಕ್ಷಕ ಶಿವಶಂಕರ್ ಬಸವಣ್ಣನವರ ಜೀವನ ಮತ್ತು ಸಾಧನೆಗಳ ಕುರಿತು ಪ್ರಧಾನ ಭಾಷಣ ಮಾಡಿದರು. ತಹಶೀಲ್ದಾರ್ ಕೆ.ಸಿ.ಸೌಮ್ಯ, ತಾಲ್ಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಪುಟ್ಟರಾಜ್, ಮುಖಂಡರಾದ ನೈಗೆರೆ ಚನ್ನಕೇಶವೇಗೌಡ, ಎನ್. ರವಿಕುಮಾರ್, ಕೆ.ಸಿ.ಲೋಕೇಶ್, ಮಾಗಲು ಬಸವರಾಜ್, ವೀರಾಜ್, ಡಿಎಸ್‌ಎಸ್ ಮುಖಂಡ ಚಂದ್ರಣ್ಣ, ರಾಷ್ಟ್ರಪ್ರಶಸ್ತಿ ವಿಜೇತ ನಿವೃತ್ತ ಶಿಕ್ಷಕ ಮಲ್ಲೇಶ್ ಉಪಸ್ಥಿತದ್ದರು.

# ಬೇಲೂರಿನಲ್ಲಿ ಗೊಂದಲದ ಗೂಡಾದ ಬಸವ ಜಯಂತಿ

## ಅಧಿಕಾರಿಗಳ ಗೈರು ಹಾಜರಿಗೆ ಅಸಮಾಧಾನ | ಕಾರ್ಯಕ್ರಮ ಬಹಿಷ್ಕಾರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಬೇಲೂರು: ತಾಲೂಕು ಆಡಳಿತದಿಂದ ಆಯೋಜಿಸಿದ್ದ ಜಗಜ್ಯೋತಿ ಬಸವೇಶ್ವರ ಜಯಂತಿ ಅವ್ಯವಸ್ಥೆಯ ಆಗರವಾಗಿ ವೀರಶೈವ ಲಿಂಗಾಯತ ಮುಖಂಡರು ಕಾರ್ಯಕ್ರಮ ಬಹಿಷ್ಕರಿಸಿದ ಘಟನೆ ನಡೆಯಿತು.

ಕಾರ್ಯಕ್ರಮ ಆರಂಭಕ್ಕೂ ಮುನ್ನವೇ ಗೊಂದಲದ ವಾತಾವರಣ ನಿರ್ಮಾಣವಾಗಿ ಯಾರು ಯಾವ ಇಲಾಖೆ ಪ್ರತಿನಿಧಿಗಳು ಹಾಜರಾಗಿದ್ದಾರೆ ಎಂಬುದೇ ಸ್ಪಷ್ಟವಾಗದ ಸ್ಥಿತಿ ಉಂಟಾಯಿತು.

ಯಾವ ಇಲಾಖೆ ಅಧಿಕಾರಿಗಳು ಇದ್ದಾರೆ ಯಾರು ಬಂದಿದ್ದಾರೆ ಕೇಳಿ, ನೋಂದಣಿ ಮಾಡಿಸಿಕೊಳ್ಳಿ ಎಂಬ ಮಾತುಗಳು ಕೇಳಿಬಂದವು. ಈ ನಡುವೆ ಕೆಲವರು ಕಾರ್ಯಕ್ರಮ ಮುಂದುವರಿಸೋಣ ಎಂದು ಸಮಾಧಾನಪಡಿಸಲು ಪ್ರಯತ್ನಿಸಿದರೂ, ಅಸಮಾಧಾನಗೊಂಡ ಮುಖಂಡರು ವಿರೋಧ ವ್ಯಕ್ತಪಡಿಸಿದರು.

ಪ್ರತಿ ವರ್ಷವೂ ಇದೇ ರೀತಿ ನಿರ್ಲಕ್ಷ್ಯ, ನಾವು ಬರುವುದೇಕೆ. ಇಲ್ಲಿ ಇರುವವರಲ್ಲಿ ತೊಂಬತ್ತು ಶೇಕಡಾ ನಮ್ಮ ಸಮಾಜದವರೇ. ಇದು ಸರ್ಕಾರಿ ಕಾರ್ಯಕ್ರಮವಾ ಅಥವಾ ಕೇವಲ ಕೆಲವರ ಪ್ರದರ್ಶನವಾ ಎಂದು ವೀರಶೈವ ಮುಖಂಡರಾದ ವಿಕ್ರಂ ಕೌರಿ ಪ್ರಶ್ನಿಸಿದರು. ಕೇವಲ ಎರಡು-ಮೂರು ಇಲಾಖೆ ಅಧಿಕಾರಿಗಳು ಮಾತ್ರ ಹಾಜರಾಗಿದ್ದ ವಿಚಾರವೂ ಆಕ್ರೋಶಕ್ಕೆ ಕಾರಣವಾಯಿತು.

ಸ್ಥಳದಲ್ಲಿದ್ದ ಅಧಿಕಾರಿಗಳೊಂದಿಗೆ ವಾಗ್ವಾದ ತೀವ್ರಗೊಂಡು ಈಗ ಬಂದಿಲ್ಲದ ಎಲ್ಲ ಅಧಿಕಾರಿಗಳಿಗೆ ನೋಟಿಸ್ ಕೊಡಬೇಕು ಎಂಬ ಆಗ್ರಹ ಜೋರಾಯಿತು. ಈ ವೇಳೆ ಮಹಿಳಾ ಅಧಿಕಾರಿ, ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸುತ್ತೇವೆ. ಗೈರು ಹಾಜರಾದವರಿಗೆ ನೋಟಿಸ್ ನೀಡುತ್ತೇವೆ ಎಂದು ಸಮಾಧಾನಪಡಿಸಲು ಯತ್ನಿಸಿದರೂ, ಅದು ಫಲಕಾರಿಯಾಗಲಿಲ್ಲ.

ಅದರಿಂದ ಮತ್ತಷ್ಟು ಆಕ್ರೋಶಗೊಂಡ ಮುಖಂಡರು, ನಾವು ಈ ಸಭೆಯನ್ನು ಬಹಿಷ್ಕರಿಸುತ್ತಿದ್ದೇವೆ. ಇದು ಯಾವುದೇ ತಾರತಮ್ಯ ಅಲ್ಲ, ಆದರೆ ಈ ರೀತಿಯ ಅವಮಾನವನ್ನು ನಾವು ಸಹಿಸುವುದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬಸವಣ್ಣನವರ ಜಯಂತಿಗೆ ತಕ್ಕ ಗೌರವ ಸಿಕ್ಕಿಲ್ಲ ಎಂಬುದು ಪ್ರಮುಖ ಆರೋಪವಾಗಿದ್ದು, ಸರ್ಕಾರಿ ಕಾರ್ಯಕ್ರಮಗಳಿಗೆ ಯಾರೂ ಜವಾಬ್ದಾರಿಯಿಂದ ಬರುತ್ತಿಲ್ಲ. ಶಾಸಕರು ಬನ್ನಿ ಎಂದು ಹೇಳಿದರೂ, ಇಲ್ಲಿ ಇಂತಹ ಅವ್ಯವಸ್ಥೆ ಇದ್ದರೆ ಹೇಗೆ ಎಂದು ವಿಕ್ರಂ ಕೌರಿ ಅಸಮಾಧಾನ ವ್ಯಕ್ತಪಡಿಸಿದರು.

ಜೊತೆಗೆ ಅಂಬೇಡ್ಕರ್ ಜಯಂತಿಯಲ್ಲಿಯೂ ನಿರ್ಲಕ್ಷ್ಯ ತೋರಲಾಗಿದೆ ಎಂಬ ಆರೋಪ ಕೇಳಿಬಂದಿತು. ಅಂಬೇಡ್ಕರ್ ಜಯಂತಿಗೂ ಸರಿಯಾದ ಗೌರವ ಕೊಡಲಿಲ್ಲ. ಚೆಂಡು ಹೂವು, ಪ್ಲಾಸ್ಟಿಕ್ ಹೂವು ಹಾಕಿ ಕಾರ್ಯಕ್ರಮ ಮುಗಿಸಿದ್ದಾರೆ. ಇದು ಗೌರವವೇ ಎಂದು ಮತ್ತೊಬ್ಬ ವೀರಶೈವ ಮುಖಂಡರು ಪ್ರಶ್ನಿಸಿದರು.

ತಾಲೂಕು ಆಡಳಿತದ ಮೇಲೆ ಯಾವುದೇ ನಿಯಂತ್ರಣವೇ ಇಲ್ಲ. ಕೇಳೋರು ಇಲ್ಲ, ಹೇಳೋರು ಇಲ್ಲ. ಯಾವ ಸಮಾಜಕ್ಕೂ ನ್ಯಾಯ ಇಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ ಎಂಬ ಕಟು ಟೀಕೆಗಳು ಕೂಡ ಕೇಳಿಬಂದವು.

ಶಾಸಕ ಹೆಚ್.ಕೆ. ಸುರೇಶ್ ಮಾತನಾಡಿ, ಬಸವ ಜಯಂತಿ ಆಚರಣೆಯಲ್ಲಿ ನಡೆದ ಅವ್ಯವಸ್ಥೆ ಹಾಗೂ ಅಧಿಕಾರಿಗಳ ನಿರ್ಲಕ್ಷ್ಯವನ್ನು ಕಟುವಾಗಿ ಖಂಡಿಸಿದರು.

ಇಂದು ಜಗಜ್ಯೋತಿ ಬಸವಣ್ಣ ಅವರ 893ನೇ ಜಯಂತಿಯ ಅಂಗವಾಗಿ ಸಮಾಜದ ಎಲ್ಲಾ ಮುಖಂಡರುಗಳು ಗೌರವದಿಂದ ಮಾಲಾರ್ಪಣೆ ಮಾಡಿ ತಾಲೂಕು ಕಚೇರಿಯಲ್ಲಿ ಕಾರ್ಯಕ್ರಮ ನಡೆಸೋಣ ಅಂತ ಬಂದಿದ್ದೇವೆ. ಆದರೆ ಇಲ್ಲಿ ಕಂಡ ಪರಿಸ್ಥಿತಿ ಸಂಪೂರ್ಣ ನಿರಾಸಾಜನಕ. ಇದನ್ನು ನೋಡಿ ಸಮಾಜದ ಮುಖಂಡರು ದಿಗ್ಭ್ರಮೆಗೆ ಒಳಗಾಗಿದ್ದಾರೆ ಎಂದು ಹೇಳಿದರು.

ಪೂರ್ವಭಾವಿ ಸಭೆಯನ್ನೇ ಕರೆಯದಿರುವುದನ್ನು ಪ್ರಶ್ನಿಸಿದ ಅವರು, ಸಾಮಾನ್ಯವಾಗಿ ರಾಷ್ಟ್ರೀಯ ಹಬ್ಬಗಳಿಗಿಂತಲೂ ಮುಂಚೆ ಸಭೆ ಕರೆಯುವುದು ಪದ್ಧತಿ. ಸಮಾಜದ ಅಧ್ಯಕ್ಷರು, ಮಹಿಳಾ ಹಾಗೂ ಯುವ ಮುಖಂಡರನ್ನು ಆಹ್ವಾನಿಸುವುದು ರೂಢಿ. ಆದರೆ ಇಲ್ಲಿ ಯಾವುದೂ ನಡೆದಿಲ್ಲ. ಇದು ಅಧಿಕಾರಿಗಳ ನಿರ್ಲಕ್ಷ್ಯದ ಸ್ಪಷ್ಟ ಉದಾಹರಣೆ ಎಂದು ಆರೋಪಿಸಿದರು.

ಏಪ್ರಿಲ್ 14ರಂದು ನಡೆದ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿಗೂ ಸಹ 36 ಇಲಾಖೆಯ ಅಧಿಕಾರಿಗಳು ಹಾಜರಾಗಿಲ್ಲ. ಬಸವಣ್ಣನವರ ಜಯಂತಿಗೂ ಬರುವುದಿಲ್ಲ ಅಂದರೆ ಇನ್ಯಾವ ಹಬ್ಬಗಳಿಗೆ ಬರ್ತಾರೆ ಎಂದು ಪ್ರಶ್ನಿಸಿದರು.

ಜಿಲ್ಲಾಡಳಿತದ ವಿರುದ್ಧ ಗಂಭೀರ ಆರೋಪ ಮಾಡಿದ ಅವರು, ವಿರೋಧ ಪಕ್ಷದ ಶಾಸಕ ಇದ್ದಾನೆ ಅನ್ನೋ ಕಾರಣಕ್ಕೆ ಈ ರೀತಿಯ ಮಲತಾಯಿ ಧೋರಣೆ ತೋರಲಾಗ್ತಿದೆಯೇ. ಇದನ್ನು ನಾನು ಪ್ರಶ್ನಿಸಬೇಕಾಗಿದೆ. ಇಂತಹ ಅವಮಾನವನ್ನು ನಾವು ಸಹಿಸುವುದಿಲ್ಲ ಎಂದು ಎಚ್ಚರಿಸಿದರು.

ಅನುಭವ ಮಂಟಪದ ಮೂಲಕ ಸಂಸತ್ತಿನ ಆದರ್ಶವನ್ನೇ ದೇಶಕ್ಕೆ ಕೊಟ್ಟ ಮಹಾನ್ ನಾಯಕನ ಜಯಂತಿಯನ್ನು ಈ ರೀತಿ ನಿರ್ಲಕ್ಷ್ಯದಿಂದ ಆಚರಿಸುವುದು ಅತ್ಯಂತ ದುಃಖದ ಸಂಗತಿ ಎಂದು ವಿಷಾದ ವ್ಯಕ್ತಪಡಿಸಿದರು.

ಈ ರೀತಿಯ ಅವಮಾನಗಳು ಮುಂದುವರಿದರೆ ಉಗ್ರ ಹೋರಾಟಗಳು ನಡೆಯುವ ಸಾಧ್ಯತೆ ಇದೆ. ಈ ವಿಷಯವನ್ನು ಸರ್ಕಾರ ಹಾಗೂ ಜಿಲ್ಲಾಧಿಕಾರಿಗಳ ಗಮನಕ್ಕೆ ತರುತ್ತೇನೆ. ಮುಂದಿನ ದಿನಗಳಲ್ಲಿ ಇಂತಹ ಘಟನೆ ಮರುಕಳಿಸಬಾರದು ಎಂದು ಕಿಡಿಕಾರಿದರು.

ವೀರಶೈವ ಯೋಗೇಶ್, ಅರುಣ್, ಬಳ್ಳೂರು ಮದನ್, ಹರೀಶ್, ಮಹಿಳಾ ಘಟಕದ ವಿಂಪು ಸಂತೋಷ್, ಲಕ್ಷ್ಮಿ, ಚಂದ್ರಕಲಾ ಸೇರಿದಂತೆ ಇತರರು ಹಾಜರಿದ್ದರು.

# ಇತಿಹಾಸದಲ್ಲಿ ಈ ದಿನ

## ಏಪ್ರಿಲ್-22

1970: ವಿಶ್ವದ ಮೊದಲ (ಭೂಮಿ ದಿನ) ಆಚರಣೆ ಆರಂಭವಾಯಿತು. ಪರಿಸರ ಸಂರಕ್ಷಣೆಯ ಮಹತ್ವವನ್ನು ಜಗತ್ತಿಗೆ ತಿಳಿಸಿದ ಮಹತ್ವದ ದಿನ.

1915: ಪ್ರಥಮ ವಿಶ್ವಯುದ್ಧದ ವೇಳೆ ಖಚ್ಚಿಟ್ಟಞ ಆಚರಿಶ್ಚಿಥಿ ಟ್ಕ್ಗಟ್ಟಥಿಂ ಯುದ್ಧದಲ್ಲಿ ಜರ್ಮನಿ ಮೊದಲ ಬಾರಿಗೆ ವಿಷ ಅನಿಲವನ್ನು ಬಳಸಿತು.

### ಜನನ

1724: ಪ್ರಸಿದ್ಧ ತತ್ವಜ್ಞಾನಿ ಇಮ್ಮಾನುಯೇಲ್ ಕಾಂಟ್, ಅವರ ಆಲೋಚನೆಗಳು ಆಧುನಿಕ ತತ್ವಶಾಸ್ತ್ರದ ಮೇಲೆ ದೊಡ್ಡ ಪ್ರಭಾವ ಬೀರಿವೆ.

1889: ಚಾರ್ಲಿ ಚಾಪ್ಲಿನ್, ಜಗತ್ತಿನ ಪ್ರಸಿದ್ಧ ಮೌನಚಿತ್ರ, ಹಾಸ್ಯನಟ

1937: ಜಾಕ್ ನಿಕಲ್ಸನ್, ಹಾಲಿವುಡ್‌ನ ಖ್ಯಾತ ನಟ

1936: ಗ್ಲೆನ್ ಕ್ಯಾಂಪ್ಬೆಲ್, ಖ್ಯಾತ ಗಾಯಕ

### ಮರಣ

1994: ರಿಚರ್ಡ್ ನಿಕ್ಸನ್,ಅಮೆರಿಕದ 37ನೇ ರಾಷ್ಟ್ರಪತಿ

2008: ಬೇಟ್ಟಿ ಪೇಜ್, ಪ್ರಸಿದ್ಧ ಮಾದರಿ ಮತ್ತು ನಟಿ

1754: ಹೆನ್ರಿ ಫೀಲ್ಡಿಂಗ್, ಖ್ಯಾತ ಇಂಗ್ಲಿಷ್ ಕಾದಂಬರಿಕಾರ

# ಕಾರು ಡಿಕ್ಕಿ: ಫೋಟೊಗ್ರಾಫರ್ ಸಾವು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ರಾಮನಾಥಪುರ-ಸಾಲಿಗ್ರಾಮ ಮಾರ್ಗಮಧ್ಯೆ ಮಂಗಳವಾರ ಎರಡು ಕಾರುಗಳ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿ ಛಾಯಾಗ್ರಾಹಕ ಮೃತಪಟ್ಟಿದ್ದಾನೆ.

ಕೊಣನೂರು ಹೋಬಳಿಯ ಕಟ್ಟೇಪುರ ಗ್ರಾಮದ ನವೀನ್ (30) ಮೃತರು. ಕಾರ್ಯಕ್ರಮವೊಂದಕ್ಕೆ ಕಾರಿನಲ್ಲಿ ತೆರಳುತ್ತಿದ್ದಾಗ ಎದುರಿನಿಂದ ಬಂದ ಕಾರು ಡಿಕ್ಕಿ ಹೊಡೆದಿದೆ. ತಲೆ ಹಾಗೂ ಹೊಟ್ಟೆ ಭಾಗಕ್ಕೆ ಬಲವಾದ ಪೆಟ್ಟು ಬಿದ್ದ ಹಿನ್ನಲೆಯಲ್ಲಿ ವ್ಯಕ್ತಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಮೃತರಿಗೆ ಹೆಂಡತಿ ಮತ್ತು ಪುಟ್ಟ ಮಗುವಿದೆ. ತಾಲ್ಲೂಕು ಛಾಯಾಗ್ರಾಹಕರ ಸಂಘ ಸಂತಾಪ ಸೂಚಿಸಿದೆ. ಸಾಲಿಗ್ರಾಮ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಅರಸೀಕೆರೆಯಲ್ಲಿ ಚಿನ್ನದ ಸರ ದೋಚಿ ಪರಾರಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದಾಗ ಬೈಕ್‌ನಲ್ಲಿ ಬಂದ ಕಿಡಿಗೇಡಿಗಳು ಮಹಿಳೆ ಕೊರಳಿಂದ 50 ಗ್ರಾಂ ತೂಕದ ಚಿನ್ನದ ಮಾಂಗಲ್ಯ ಸರ ಕಿತ್ತುಕೊಂಡು ಹೋಗಿರುವ ಘಟನೆ ನಗರದಲ್ಲಿ ನಡೆದಿದೆ. ಮಲ್ಲೇಶ್ವರ ನಗರದ ಕೋಮಲ ಅವರು ಸೋಮವಾರ ಪಿಪಿ ವೃತ್ತದಲ್ಲಿ ನಡೆಯುತ್ತಿದ್ದ ಬಸವ ಪ್ರತಿಮೆ ಅನಾವರಣ ಸಮಾರಂಭದಲ್ಲಿ ಭಾಗವಹಿಸಿ ನಂತರ ಕಾಲ್ನಡಿಗೆಯಲ್ಲಿ ಮನೆಗೆ ಹೋಗುತ್ತಿದ್ದಾಗ ಕಿಡಿಗೇಡಿಗಳು ಕೃತ್ಯ ಎಸಗಿದ್ದಾರೆ. ಲಕ್ಷ್ಮೀಪುರದ ಬಲಮುರಿ ಗಣಪತಿ ದೇವಸ್ಥಾನ ಮುಂಭಾಗ ಹೋಗುತ್ತಿದ್ದಾಗ ಎದುರುಗಡೆಯಿಂದ ಬೈಕ್‌ನಲ್ಲಿ ಬಂದ ದುಷ್ಕರ್ಮಿಗಳು ಸರ ಕಿತ್ತುಕೊಂಡು ಪರಾರಿಯಾಗಿದ್ದಾರೆ. ಅಂದಾಜು 4 ಲಕ್ಷ ರೂ. ಮೌಲ್ಯದ ಸರ ಕಳುವಾಗಿದೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ತಲೆದಿಂಬಿಗೆ ಇಟ್ಟಿದ್ದ ಮಾಂಗಲ್ಯ ಸರ ಮಾಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಾತ್ರಿ ಮಲಗುವಾಗ ತಲೆದಿಂಬಿನ ಕೆಳಗೆ ಇಟ್ಟಿದ್ದ 50 ಗ್ರಾಂ ತೂಕದ ಚಿನ್ನದ ಮಾಂಗಲ್ಯ ಸರ ಕಳುವಾಗಿರುವ ಘಟನೆ ಬಿ.ಕಾಟಿಹಳ್ಳಿ ಕೊಪ್ಪಲಿನಲ್ಲಿ ನಡೆದಿದೆ.

ಹನುಮಮ್ಮ ಎಂಬುವವರ ಸರ ಏ. 15ರ ರಾತ್ರಿ ಕಳುವಾಗಿದೆ. ರಾತ್ರಿ 10 ಗಂಟೆಗೆ ಮಲಗುವ ಕೋಣೆಯಲ್ಲಿ ತಲೆ ದಿಂಬಿನ ಕೆಳಗೆ ಸರ ಇಟ್ಟಿದ್ದರು. ಬೆಳಿಗ್ಗೆ ಎದ್ದು ನೋಡಿದಾಗ ನಾಪತ್ತೆಯಾಗಿದೆ. ಕಳೆದ ಐದು ದಿನಗಳಿಂದ ಹುಡುಕಾಡಿ ಪರಿಚಯಸ್ಥರನ್ನು ವಿಚಾರಿಸಿದರೂ ಪತ್ತೆಯಾಗಿಲ್ಲ. ಬಡಾವಣೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಗಾಂಜಾ ಸೇವಿಸಿ ಗಲಾಟೆ: ಬಂಧನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ತಾಲ್ಲೂಕಿನ ಹೂವಿನಹಳ್ಳಿಯಲ್ಲಿ ಗಾಂಜಾ ಸೇವಿಸಿ ಗ್ರಾಮಸ್ಥರೊಂದಿಗೆ ಜಗಳ ಮಾಡುತ್ತಿದ್ದ ಇಬ್ಬರನ್ನು ಪೊಲೀಸರು ಬಂಧಿಸಿದ್ದಾರೆ. ಏ. 19ರ ರಾತ್ರಿ 10 ಗಂಟೆ ಸಮಯದಲ್ಲಿ ಮಾಹಿತಿ ಮೇರೆಗೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದಾಗ ಧನಂಜಯ ಹಾಗೂ ದರ್ಶನ್ ಎಂಬುವವರು ಗಾಂಜಾ ನಶೆಯಲ್ಲಿ ಊರಿನ ಜನರೊಂದಿಗೆ ಕ್ಷುಲ್ಲಕ ಕಾರಣಕ್ಕೆ ಜಗಳ ಮಾಡುತ್ತಿದ್ದುದು ಗೊತ್ತಾಗಿದೆ. ಇಬ್ಬರನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿದಾಗ ಅಮಲು ಪದಾರ್ಥ ಸೇವಿಸಿರುವುದು ದೃಢಪಟ್ಟಿದೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248